**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಉಮಾಶ್ರೀ (ನಾಮನಿರ್ದೇಶನ ಚುನಾವಣಾ ಕ್ಷೇತ್ರ) ಇವರು ನಿಯಮ-72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ**

**ವಿಷಯ:- "ರಾಜ್ಯದಲ್ಲಿ ಇತ್ತೀಚೆಗೆ ಮಹಿಳೆಯರ ಮೇಲೆ ಹೆಚ್ಚುತ್ತಿರುವ ದಬ್ಬಾಳಿಕೆ, ಅತ್ಯಾಚಾರ ವರದಕ್ಷಿಣೆ-ಕಿರುಕುಳದಂತಹ ಪ್ರಕರಣಗಳಿಗೆ ಸಂಬಂಧಿಸಿದಂತೆ ಇನ್ನಷ್ಟು ಕಠಿಣ – ಕಾನೂನು ಕ್ರಮಗಳನ್ನು ರೂಪಿಸುವಂತೆ ಹಾಗೂ ಮಹಿಳೆಯರ ಸುರಕ್ಷತೆಗೆ ಒತ್ತು ನೀಡುವುದಕ್ಕೆ ಸಂಬಂಧಿಸಿದಂತೆ"**

## ಉತ್ತರ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಮಹಿಳೆಯರ ಸಬಲೀಕರಣ ಮತ್ತು ಪುನರ್ವಸತಿ ಕಲ್ಪಿಸುವ ಕುರಿತಂತೆ ವಿವಿಧ ಸೌಲಭ್ಯಗಳನ್ನು ಒದಗಿಸುವುದಕ್ಕಾಗಿ ಈ ಕೆಳಕಾಣಿಸಿದ ಯೋಜನೆಗಳು / ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

**ರಾಜ್ಯ ಸರ್ಕಾರದ ಯೋಜನೆಗಳು:**

**(1) ಸಾಂತ್ವನ**: ಸಮಾಜದಲ್ಲಿ ವರದಕ್ಷಿಣೆ ಕಿರುಕುಳ, ಲೈಂಗಿಕ ಕಿರುಕುಳ, ಕೌಟುಂಬಿಕ ದೌರ್ಜನ್ಯ, ಅತ್ಯಾಚಾರಕ್ಕೊಳಗಾದ ಮಹಿಳೆಯರಿಗೆ ಕಾನೂನು ನೆರವು, ತಾತ್ಕಾಲಿಕ ಆಶ್ರಯವನ್ನು ಒದಗಿಸಿ, ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಸಶಕ್ತರನ್ನಾಗಿಸುವ ಗುರಿಯನ್ನು ಹೊಂದಿದೆ. ಪ್ರಸ್ತುತ ರಾಜ್ಯದಲ್ಲಿ 180 ಸಾಂತ್ವನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಜನವರಿ-2024ರ ಅಂತ್ಯದವರೆಗೆ 21516 ಮಹಿಳೆಯರು ಸಮಾಲೋಚನೆ ಸೇವೆ ಪಡೆದಿರುತ್ತಾರೆ.

**(2) ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ** 2005 **ನಿಯಮ** 2006 : ಕುಟುಂಬದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯ ನಡೆದಾಗ ನ್ಯಾಯಾಲಯದ ಮುಖಾಂತರ ಮಹಿಳೆಯರಿಗೆ ಆರ್ಥಿಕ ಪರಿಹಾರ, ರಕ್ಷಣಾ ಆದೇಶ, ವಾಸದ ಆದೇಶ, ಮಕ್ಕಳ ವಶ, ತಾತ್ಕಾಲಿಕ ಆಶ್ರಯ, ವೈದ್ಯಕೀಯ ಹಾಗೂ ಕಾನೂನು ನೆರವನ್ನು ಒದಗಿಸಲು ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ **2005** ಹಾಗೂ ನಿಯಮ **2006** ನ್ನು ಅನುಷ್ಠಾನಗೊಳಿಸಲಾಗುತ್ತಿದೆ.

- ಜಿಲ್ಲಾ ಮಟ್ಟದಲ್ಲಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ತಾಲ್ಲೂಕು ಮಟ್ಟದಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಗೂ **47** ಪ್ರತ್ಯೇಕ ಸಂರಕ್ಷಣಾಧಿಕಾರಿಗಳು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರನ್ನು ದೌರ್ಜನ್ಯಕ್ಕೊಳಗಾದ ಮಹಿಳೆಯರನ್ನು ರಕ್ಷಿಸಲು ಸಂರಕ್ಷಣಾಧಿಕಾರಿಗಳೆಂದು ನೇಮಿಸಲಾಗಿದೆ.
- ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ರಕ್ಷಣೆ, ಅಲ್ಪಾವಧಿ ಆಶ್ರಯ ಮತ್ತು ಸಲಹೆ ಹಾಗು ಮಾರ್ಗದರ್ಶನ ಒದಗಿಸಲು ರಾಜ್ಯದಲ್ಲಿ ಸ್ವಾಧಾರ ಕೇಂದ್ರಗಳು, ಅಲ್ಪಾವಧಿ ವಸತಿಗೃಹಗಳು, ಸಾಂತ್ವನ ಕೇಂದ್ರಗಳನ್ನು ರಕ್ಷಣಾ ಗೃಹಗಳೆಂದು ಅಧಿಸೂಚನೆ ಹೊರಡಿಸಲಾಗಿದ್ದು, ನೊಂದ ಮಹಿಳೆಯರು ಇಲ್ಲಿ ಸಮಾಲೋಚನೆ ಹಾಗು ರಕ್ಷಣೆ, ಅಲ್ಪಾವಧಿ ಆಶ್ರಯ ಪಡೆಯಬಹುದಾಗಿದೆ.
- ಇದಲ್ಲದೆ **116** ಸ್ವಯಂಸೇವಾ ಸಂಸ್ಥೆಗಳನ್ನು ನೊಂದ ಮಹಿಳೆಯರಿಗೆ ಕಾನೂನು, ವೈದ್ಯಕೀಯ ಹಾಗೂ ಇತರೆ ನೆರವು ನೀಡಲು ಸೇವಾಧಾತ ಸಂಸ್ಥೆಗಳು (Service Providers) ಎಂದು ಅಧಿಸೂಚನೆ ಹೊರಡಿಸಲಾಗಿದೆ.
- ರಾಜ್ಯದಲ್ಲಿನ ಎಲ್ಲಾ ಸರ್ಕಾರಿ ಆಸ್ಪತ್ರೆಗಳು ನೊಂದವರಿಗೆ ವೈದ್ಯಕೀಯ ನೆರವು ನೀಡುತ್ತಿವೆ.
- ರಾಜ್ಯದ ಎಲ್ಲಾ ತಾಲ್ಲೂಕುಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಯಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಸಹಯೋಗದಲ್ಲಿ ಉಚಿತ ಕಾನೂನು ಸಲಹಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಆ ಕೇಂದ್ರಗಳಲ್ಲಿ ನುರಿತ ನ್ಯಾಯವಾದಿಗಳು ಪ್ರತಿ ಬುಧವಾರ ಮತ್ತು ಶನಿವಾರ ಉಚಿತ ಕಾನೂನು ಸಲಹೆ ನೀಡುತ್ತಿದ್ದಾರೆ.

- ಕಾಯ್ದೆಯ ಸಮರ್ಪಕ ಅನುಷ್ಠಾನಕ್ಕಾಗಿ ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ "ಸಮನ್ವಯ ಸಮಿತಿ" ಗಳನ್ನು ರಚಿಸಲಾಗಿದೆ.
- ಜನವರಿ-2024ರ ಅಂತ್ಯದವರೆಗೆ 4930 ಪ್ರಕರಣಗಳು ದಾಖಲಾಗಿರುತ್ತವೆ.

**ಕೇಂದ್ರ ಸರ್ಕಾರದ ಯೋಜನೆಗಳು:**

**(3) ಶಕ್ತಿಸದನ (ಸ್ವಾಧಾರಗೃಹ/ಉಜ್ವಲ ಕೇಂದ್ರಗಳು)**:

(ಎ) **ಸ್ವಾಧಾರ ಗೃಹ:** ಸಂಕಷ್ಟಕರ ಪರಿಸ್ಥಿತಿಯಲ್ಲಿರುವ ಮಹಿಳೆಯರಿಗಾಗಿ ತಾತ್ಕಾಲಿಕ ಆಶ್ರಯ, ಆಹಾರ, ಬಟ್ಟೆ, ವೈದ್ಯಕೀಯ ಸೇವೆ, ಸಮಾಲೋಚನೆ, ಕಾನೂನು ನೆರವು ಒದಗಿಸಲಾಗುತ್ತಿದೆ. ಪ್ರಸ್ತುತ ರಾಜ್ಯಾದ್ಯಂತ 51 ಸ್ವಾಧಾರ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

(ಬಿ) **ಉಜ್ವಲ:** ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯವು ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟಲು, ಸಾಗಾಣಿಕೆಗೆ ಹಾಗೂ ವಾಣಿಜ್ಯ ಲೈಂಗಿಕ ದುರುಪಯೋಗಕ್ಕೆ ಒಳಪಟ್ಟವರನ್ನು ರಕ್ಷಿಸಲು, ಇವರಿಗೆ ಪುನರ್‌ವಸತಿ ಕಲ್ಪಿಸಲು ಮತ್ತು ಕುಟುಂಬದವರೊಂದಿಗೆ ಪುನರ್ ವಿಲೀನಗೊಳಿಸುವುದು. ಪ್ರಸ್ತುತ ರಾಜ್ಯದಲ್ಲಿ 15 ಉಜ್ವಲ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಶಕ್ತಿ ಸದನ (ಸ್ವಾಧಾರ ಗೃಹ/ಉಜ್ವಲ) ಯೋಜನೆಯಡಿ ಜನವರಿ-2024ರ ಅಂತ್ಯಕ್ಕೆ 1899 ಮಹಿಳೆಯರು ಆಶ್ರಯ ಪಡೆದಿರುತ್ತಾರೆ.

**(4) ಒನ್ ಸ್ಟಾಪ್ ಸೆಂಟರ್ (ಸಖಿ)** :ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಸೌಲಭ್ಯ ಅಂದರೆ, ವೈದ್ಯಕೀಯ ಚಿಕಿತ್ಸೆ ಮತ್ತು ನೆರವು, ಪೊಲೀಸ್ ನೆರವು, ಕಾನೂನು ನೆರವು ಹಾಗೂ ಸಮಾಲೋಚನೆ ವ್ಯವಸ್ಥೆಗಳನ್ನು ಒದಗಿಸುವ ಉದ್ದೇಶದಿಂದ ಒನ್ ಸ್ಟಾಪ್ ಸೆಂಟರ್ ಕೇಂದ್ರ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. ಪ್ರಸ್ತುತ 31 ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. 2023-24 ನೇ ಸಾಲಿನಲ್ಲಿ ಜನವರಿ-2024ರ ಅಂತ್ಯಕ್ಕೆ 5629 ಮಹಿಳೆಯರು ವಿವಿಧ ರೀತಿಯ ಸೌಲಭ್ಯ ಪಡೆದಿರುತ್ತಾರೆ.

**(5) ಮಹಿಳಾ ಸಹಾಯವಾಣಿ-181:** ಮಹಿಳೆಯರಿಗೆ ಮಾಹಿತಿಯನ್ನು ನೀಡಲು ಹಾಗೂ ದೌರ್ಜನ್ಯ/ಸಂಕಷ್ಟದಲ್ಲಿರುವ ಮಹಿಳೆಯರಿಗೆ ನೆರವನ್ನು ಒದಗಿಸುವ ನಿಟ್ಟಿನಲ್ಲಿ ಮಹಿಳಾ ಸಹಾಯವಾಣಿ-181 ಎಂಬ ಉಚಿತ ದೂರವಾಣಿ ಸೇವೆಯನ್ನು ದಿನದ 24x7 ಗಂಟೆಗಳು ಒದಗಿಸಲಾಗುವುದು. 2023-24ನೇ ಸಾಲಿನಲ್ಲಿ WCD Control Roomಅನ್ನು C-DAC ಸಂಸ್ಥೆಯ ಸಹಯೋಗದೊಂದಿಗೆ ಸ್ಥಾಪಿಸಲಾಗಿದೆ. 2023-24ನೇ ಸಾಲಿನಲ್ಲಿ ಜನವರಿ-2024ರ ಅಂತ್ಯಕ್ಕೆ 45203 ಕರೆಗಳಿಗೆ ಸೂಕ್ತ ಸೌಲಭ್ಯ ಒದಗಿಸಲಾಗಿದೆ.

## ಕರ್ನಾಟಕ ರಾಜ್ಯ ಮಹಿಳಾ ಆಯೋಗ

ಮಹಿಳೆಯರ ಹಿತಾಸಕ್ತಿಗಳನ್ನು ರಕ್ಷಿಸುವ, ಅವರ ಪ್ರಗತಿ ಮತ್ತು ಅಭಿವೃದ್ಧಿಯನ್ನು ಖಚಿತಪಡಿಸುವ ಸಂವಿಧಾನಿಕ ಗುರಿಗೆ ಅನುಗುಣವಾಗಿ, ಕರ್ನಾಟಕ ಸರ್ಕಾರವು, ಕರ್ನಾಟಕ ರಾಜ್ಯ ಮಹಿಳಾ ಆಯೋಗ ಅಧಿನಿಯಮ 1995ರ ಅಡಿಯಲ್ಲಿ ದಿನಾಂಕ:26-05-1995ರಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗವನ್ನು ರಚಿಸಿತು. ಇದು ಶಾಸನಬದ್ಧ ಆಯೋಗವಾಗಿದ್ದು, ಇದು ದಿನಾಂಕ:06-08-1996ರಿಂದ ಕಾರ್ಯನಿರ್ವಹಿಸಲು ಪ್ರಾರಂಭಿಸಿತು.

ಮಹಿಳೆಯರಿಗೆ ಸಂಬಂಧಪಡುವ ಸಂವಿಧಾನದ ಮತ್ತು ಇತರೆ ಕಾನೂನುಗಳ ಉಪಬಂಧಗಳನ್ನು ಉಲ್ಲಂಘಿಸುವ ಪ್ರಕರಣ, ಸಮುಚಿತ ಪ್ರಾಧಿಕಾರದ ಮುಂದೆ ತರುವುದು.

ಕರ್ನಾಟಕ ರಾಜ್ಯ ಮಹಿಳಾ ಆಯೋಗದಲ್ಲಿ ಕೌಟುಂಬಿಕ ದೌರ್ಜನ್ಯ, ವರದಕ್ಷಿಣೆ ಕಿರುಕುಳ, ಲೈಂಗಿಕ ಕಿರುಕುಳ, ಕೆಲಸದ ಸ್ಥಳದಲ್ಲಿ ಕಿರುಕುಳ, ವಿಚ್ಛೇಧನ, ಪ್ರೇಮ ಪ್ರಕರಣ, ಅತ್ಯಾಚಾರ ಹಾಗೂ ಇತರೆ ಪ್ರಕರಣಗಳು ದಾಖಲಾಗಿರುತ್ತದೆ. ಕರ್ನಾಟಕ ರಾಜ್ಯ ಮಹಿಳಾ ಆಯೋಗದಲ್ಲಿ ಏಪ್ರಿಲ್-2023 ರಿಂದ ಜನವರಿ - 2024 ರವರೆಗೆ 1735 ದೂರರ್ಜಿಗಳು ಸ್ವೀಕೃತವಾಗಿದ್ದು, ಇದರಲ್ಲಿ 1365 ಅರ್ಜಿಗಳು ಮುಕ್ತಾಯವಾಗಿರುತ್ತವೆ. ಚಾಲ್ತಿಯಲ್ಲಿರುವ 370 ಪ್ರಕರಣಗಳನ್ನು ಪರಿಶೀಲಿಸಿ, ಡಿ.ಸಿ, ಸಿ.ಪಿ, ಎಸ್.ಪಿ, ಡಿ.ಸಿ.ಪಿ., ಸಿ.ಇ.ಓ., ಡಿ.ಡಿ, ಸಿ.ಡಿ.ಪಿ.ಓ ಮತ್ತು ಇತರೆ ಕಛೇರಿಗಳಿಗೆ ಪತ್ರ ಬರೆಯಲಾಗಿದ್ದು, ಇವರಿಂದ ವರದಿ ನಿರೀಕ್ಷಿಸಲಾಗುತ್ತಿದೆ.

1. ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) ಅಧಿನಿಯಮ 2013. ಈ ಅಧಿನಿಯಮದ ಅನ್ವಯ ಉದ್ಯೋಗಸ್ಥ ಮಹಿಳೆಯರಿಗೆ, ಸುರಕ್ಷಿತವಾಗಿ ಕೆಲಸ ನಿರ್ವಹಿಸಲು ಅನುಕೂಲಕರವಾದ ವಾತಾವರಣ ಕಲ್ಪಿಸುವ ಉದ್ದೇಶವಾಗಿದೆ. ಈ ಸಂಬಂಧ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) ಅಧಿನಿಯಮ 2013ನ್ನು ಜಾರಿಗೆ ತರಲಾಗಿದೆ.
2. ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005, ನಿಯಮ 2006-ಕೌಟುಂಬಿಕ ಸಂಬಂಧದಿಂದ ದೈಹಿಕ, ಲೈಂಗಿಕ, ಆರ್ಥಿಕ, ಭಾವನಾತ್ಮಕ ಹಿಂಸೆಗಳನ್ನು ಅನುಭವಿಸುತ್ತಿರುವ ಮಹಿಳೆಯನ್ನು ಈ ಕಾಯ್ದೆಯಡಿಯಲ್ಲಿ ಸಂರಕ್ಷಿಸುವುದು ಕಾಯ್ದೆಯ ಮುಖ್ಯ ಉದ್ದೇಶವಾಗಿದೆ.
3. ವರದಕ್ಷಿಣೆ ನಿಷೇಧ ಅಧಿನಿಯಮ 1961 ಕಾಯ್ದೆ ಪ್ರಕಾರ ವರದಕ್ಷಿಣೆ ಕೇಳುವುದು/ಕೊಡುವುದು/ತೆಗೆದುಕೊಳ್ಳುವುದು ನಿಷೇಧಿಸಲಾಗಿದೆ.
4. ಅತ್ಯಾಚಾರ ಹೇಯ ಕೃತ್ಯವಾಗಿದ್ದು, ಭಾರತ ದಂಡ ಸಂಹಿತೆಯ 375 ಮತ್ತು 376ನೇ ಪ್ರಕರಣಗಳ ರೀತ್ಯ ಇದು ಅಪರಾಧ ಮತ್ತು ಶಿಕ್ಷಾರ್ಹ.

ಕಾನೂನು ಅರಿವು ಕಾರ್ಯಕ್ರಮಗಳನ್ನು ಜಿಲ್ಲಾ ಮಟ್ಟದಲ್ಲಿ, ತಾಲ್ಲೂಕು ಮಟ್ಟದಲ್ಲಿ ಹಾಗೂ ವಿಭಾಗೀಯ ಮಟ್ಟದಲ್ಲಿ, ಶಿಕ್ಷಣ ಸಂಸ್ಥೆಗಳಲ್ಲಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮುಖಾಂತರ ಮಹಿಳಾ ಕಾನೂನುಗಳ ಬಗ್ಗೆ ಅರಿವನ್ನು ಮೂಡಿಸಲಾಗುತ್ತಿದೆ.

ರಾಜ್ಯ ಮಹಿಳಾ ಆಯೋಗದಲ್ಲಿ ಸ್ವೀಕೃತವಾಗುವ ಪ್ರತಿಯೊಂದು ಅರ್ಜಿಗಳನ್ನು, ಶೀಘ್ರ ಮತ್ತು ತ್ವರಿತಗತಿಯಲ್ಲಿ ವಿಲೇವಾರಿ ಮಾಡಲು ಹಾಗೂ ಕಾನೂನಿನ ಚೌಕಟ್ಟಿನಲ್ಲಿ ಸಮಸ್ಯೆಗಳನ್ನು ಇತ್ಯರ್ಥಪಡಿಸಲು ಆದ್ಯತೆ ನೀಡಲಾಗುತ್ತಿದೆ.

ಮಮಇ/11/ರಾಮಆ/2024

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು.